**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.2634/2020**

**ಸಿ.ಡಬ್ಲ್ಯೂ-04**

**ಪಿ.ಡಬ್ಲ್ಯೂ-03**

ಸಾಕ್ಷಿಯ ಹೆಸರು : ಅಶೋಕ ಕಾಟೆ

ತಂದೆ/ಗಂಡನ ಹೆಸರು : ಗೋಪಿನಾಥ

ವಯಸ್ಸು : 42 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಭತಗುಣಕಿ

**ದಿನಾಂಕ:17-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ಚಾಸಾ 1 ನನ್ನ ತಂದೆ. ಚಾಸಾ 5 ನನ್ನ ಚಿಕ್ಕಪ್ಪ. ಆರೋಪಿತರು ನಮ್ಮ ಸಂಬಂಧಿಕರು.

ನನಗೆ ಈ ಘಟನೆಯ ಕುರಿತು ಯಾವುದೇ ಮಾಹಿತಿ ಇಲ್ಲ. ಆರೋಪಿತರು ಅಕ್ರಮವಾಗಿ ಪ್ರವೇಶ ಮಾಡಿ ತಡೆಹಿಡಿದು ಅವಾಚ್ಯ ಶಬ್ದಗಳಿಂದ ಬೈದು ಜೀವ ಬೆದರಿಕೆ ಹಾಕಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದ:**

ದಿಃ24.06.2020 ರಂದು ಮಧ್ಯಾಹ್ನ 2 ಗಂಟೆಗೆ ನಮ್ಮ ಜಮೀನಿನ ಸರ್ವೆ ನಂ.78/2 ರ ವಿಸ್ತೀರ್ಣ 2 ಎಕರೆ 8 ಗುಂಟೆ ಜಮೀನಿನಲ್ಲಿ ನಾನು ಮತ್ತು ಚಾಸಾ 1 ಮತ್ತು ನಾನು ಚಾಸಾ 6 ರವರ ಜಮೀನಿನಲ್ಲಿ ಅವರ ಟ್ರ್ಯಾಕ್ಟರನಿಂದ ತೋಗರಿ ಬಿತ್ತುತ್ತಿದ್ದಾಗ ಮಧ್ಯಾಹ್ನ 2.30 ಗಂಟೆಗೆ ಆರೋಪಿತರು ನಮ್ಮ ಜಮೀನಿನಲ್ಲಿ ಅತೀಕ್ರಮಣ ಮಾಡಿ ನಾವು ಜಮೀನು ಬಿತ್ತುತ್ತಿರುವ ಟ್ರ್ಯಾಕ್ಟರಗೆ ಅಡ್ಡಗಟ್ಟಿ ನಿಲ್ಲಿಸಿ 1 ಹಾಗೂ 3 ರಿಂದ 5 ನೇ

-2-

ಆರೋಪಿತರು ಈ ಜಮೀನಿನಲ್ಲಿ ನಮಗೂ ಪಾಲು ಬರುತ್ತದೆ ಪಾಲು ಕೊಡದೇ ಇದ್ದರೆ ನಿಮ್ಮನ್ನು ಸಾಯಿಸಿ ಜಮೀನಿನಲ್ಲಿ ಪಾಲು ಪಡೆಯುತ್ತೇವೆ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. 2 ಮತ್ತು 6 ನೇ ಆರೋಪಿತರು ನಮಗೆ ಅಡ್ಡಗಟ್ಟಿ ಬಿಗಿ ಹಿಡಿದು ಜಮೀನಿನಲ್ಲಿ ಬಿತ್ತುವುದನ್ನು ನಿಲ್ಲಿಸಿ ಈ ಜಮೀನಿನಲ್ಲಿ ಬಿತ್ತಬೇಡಿ ಎಂದು ತಾಕಿತು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ಚಾಸಾ 1 ರಮರ ದೂರನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ದಿಃ29.06.2020 ರಂತೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿ.ಪಿ.2 ಎಂದು ಗುರುತಿಸಲಾಯಿತು. ಆರೋಪಿತರು ಅಣ್ಣ ತಮ್ಮಂದಿರು ಆಗಿರುವ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.2634/2020**

**ಸಿ.ಡಬ್ಲ್ಯೂ-01**

**ಪಿ.ಡಬ್ಲ್ಯೂ-02**

| | |
|---|---|
| ಸಾಕ್ಷಿಯ ಹೆಸರು | : ಗೋಪಿನಾಥ ಕಾಟೆ |
| ತಂದೆ/ಗಂಡನ ಹೆಸರು | : ಬಂಡು |
| ವಯಸ್ಸು | : 80 ವರ್ಷ |
| ಉದ್ಯೋಗ | : ವ್ಯವಸಾಯ |
| ವಾಸಸ್ಥಳ | : ಭತಗುಣಕಿ |

**ದಿನಾಂಕ:17-04-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ</u>**

ಚಾಸಾ 2 ಮತ್ತು 3 ರವರ ಪರಿಚಯ ಇರುತ್ತದೆ. ಚಾಸಾ 4 ನನ್ನ ಮಗ. ಚಾಸಾ 5 ನನ್ನ ತಮ್ಮ. ಚಾಸಾ 6 ಮತ್ತು 7 ರವರ ಪರಿಚಯ ಇರುತ್ತದೆ.

ಈಗ್ಗೆ 4-5 ವರ್ಷಗಳ ಹಿಂದೆ ನಮ್ಮ ಮತ್ತು ಆರೋಪಿತರ ನಡುವೆ ಬಾಯಿಮಾತಿನ ಜಗಳವಾಗಿದ್ದು ಆಗ ಆರೋಪಿತರಿಗೆ ಬುದ್ದಿವಾದ ಹೇಳುವಂತೆ ಪೊಲೀಸರಿಗೆ ತಿಳಿಸಿದ್ದು ಆಗ ಪೊಲೀಸರು ಕೆಲವು ದಾಖಲೆಗಳ ಮೇಲೆ ನನ್ನ ಹೆಬ್ಬೆಟ್ಟಿನ ಸಹಿ ಪಡೆದಿರುತ್ತಾರೆ ಆದರೆ ಅದು ಯಾವ ಕಾರಣಕ್ಕಾಗಿ ಎಂದು ನನಗೆ ಗೊತ್ತಿಲ್ಲ. ಆರೋಪಿತರು ನನಗೆ ಗುಂಪು ಕಟ್ಟಿಕೊಂಡು ಬಂದು ಹೊಡೆಬಡೆ ಮಾಡಿರುವುದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ನಮ್ಮ ಜಮೀನಿನಲ್ಲಿ ಅತೀಕ್ರಮ ಪ್ರವೇಶ ಮಾಡಿಲ್ಲ, ನನ್ನನ್ನು ತಡೆ ಹಿಡಿದಿಲ್ಲ, ಜೀವದ ಬೆದರಿಕೆ ಹಾಕಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಘಟನೆ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

-2-

**<u>ಪಾಟೀ ಸವಾಲು : ಮಾನ್ಯ ಸ.ಸ.ಅ. ರವರಿಂದ:</u>**

ದಿಃ24.06.2020 ರಂದು ಮಧ್ಯಾಹ್ನ 02.00 ಗಂಟೆಗೆ ನಮ್ಮ ಜಮೀನಿನ ಸರ್ವೆ ನಂ.78/2 ಇದು 2 ಎಕರೆ 08 ಗುಂಟೆ ಜಮೀನಿನಲ್ಲಿ ತೋಗರಿ ಬಿತ್ತುವ ಸಲುವಾಗಿ ಚಾಸಾ 6 ಇವರ ಟ್ರ್ಯಾಕ್ಟರದಿಂದ ಹೊಲದಲ್ಲಿ ನಾನು, ಚಾಸಾ 4 ಮತ್ತು 5 ರವರು ಸೇರಿ ತೋಗರಿ ಬಿತ್ತುವಾಗ ಆರೋಪಿತರು ನಮ್ಮ ಜಮೀನಿಗೆ ಅಕ್ರಮವಾಗಿ ಬಂದು ಬಿತ್ತುವುದನ್ನು ಅಡ್ಡಗಟ್ಟಿ ನಿಲ್ಲಿಸಿ ಟ್ರ್ಯಾಕ್ಟರ ಮುಂದೆ ಹೋಗದಂತೆ ಮಾಡಿ 1 ರಿಂದ 4 ನೇ ಆರೋಪಿತರು ನನಗೆ ಹಾಗೂ ಚಾಸಾ 4 ಮತ್ತು 5 ರವರಿಗೆ ಎಲ್ಲಿಯೂ ಹೋಗದಂತೆ ಹಿಡಿದು ನಿಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಮಧ್ಯಾಹ್ನ 2.30 ಗಂಟೆಯಾಗಿತ್ತು ಎಂದರೆ ಸರಿಯಲ್ಲ. ಆರೋಪಿತರು ನಮಗೆ ಅವಾಚ್ಯ ಶಬ್ದಗಳಿಂದ ಬೈದು ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ನಾನು ದಿಃ28.06.2020 ರಂದು ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ದಿಃ29.06.2020 ರಂದು 10 ರಿಂದ 11 ಗಂಟೆಯವರೆಗೆ ನಾನು ತೋರಿಸಿದಂತೆ ಸ್ಥಳ ಪಂಚನಾಮೆಯನ್ನು ಚಾಸಾ 2 ಮತ್ತು 3 ರವರ ಸಮಕ್ಷಮ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ದೂರನ್ನು ನೀಡಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸಾಕ್ಷಿಯು ನಾವು ಈಗ ಹಿರಿಯರ ಮಾತು ಕೇಳಿ ರಾಜಿ ಮಾಡಿಕೊಂಡಿರುತ್ತೇವೆ ಎಂದು ಸ್ವತಃ ನುಡಿಯುತ್ತಾರೆ. ರಾಜಿಯಾದ ಕಾರಣ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**